# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 309
ಮಾನ್ಯ ಸದಸ್ಯರ ಹೆಸರು : ಶ್ರೀ ಯು.ಬಿ.ವೆಂಕಟೇಶ್
ಉತ್ತರಿಸುವ ದಿನಾಂಕ : 19-07-2024
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಹಿಂದಿನ ಸರ್ಕಾರದ ಅವಧಿಯಲ್ಲಿ ಭೋವಿ ಅಭಿವೃದ್ಧಿ ನಿಗಮಕ್ಕೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು; ಸದರಿ ಅನುದಾನವನ್ನು ಯಾವ ಯಾವ ಕಾರ್ಯಕ್ರಮ /ಯೋಜನೆಗಳಿಗಾಗಿ ಬಳಕೆ ಮಾಡಲಾಗಿದೆ;</td><td>ಹಿಂದಿನ ಸರ್ಕಾರದ ಅವಧಿಯಲ್ಲಿ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮಕ್ಕೆ ಬಿಡುಗಡೆ ಮಾಡಿರುವ ಅನುದಾನ ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ.ಸಂ</th><th>ವರ್ಷ</th><th>ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ)</th></tr>
<tr><td>1</td><td>2019-20</td><td>4796.25</td></tr>
<tr><td>2</td><td>2020-21</td><td>4215.00</td></tr>
<tr><td>3</td><td>2021-22</td><td>4000.00</td></tr>
<tr><td>4</td><td>2022-23</td><td>10749.92</td></tr>
<tr><td colspan="2">ಒಟ್ಟು</td><td>23761.17</td></tr>
</table>
ಸದರಿ ಅನುದಾನವನ್ನು ನಿಗಮದ ಈ ಕೆಳಕಾಣಿಸಿದ ವಿವಿಧ ಅಭಿವೃದ್ಧಿ ಯೋಜನೆಗಳಿಗಾಗಿ ಬಳಕೆ ಮಾಡಲಾಗಿರುತ್ತದೆ.<br>
1. ಸ್ವಯಂ ಉದ್ಯೋಗ (ನೇರಸಾಲ) ಯೋಜನೆ.<br>
2. ಉದ್ಯಮಶೀಲತಾ ಯೋಜನೆ.<br>
3. ಮೈಕ್ರೋಕ್ರೆಡಿಟ್ ಯೋಜನೆ.<br>
4. ಗಂಗಾ ಕಲ್ಯಾಣ ಯೋಜನೆ.<br>
5. ಭೂ ಒಡೆತನ ಯೋಜನೆ.<br>
6. ಐರಾವತಾ ಯೋಜನೆ.<br>
7. ಸಮೃದ್ಧಿ ಯೋಜನೆ.</td></tr>
<tr><td>ಆ)</td><td>ಅನುದಾನ ಬಳಕೆಯಲ್ಲಿ ಗುರಿ ಸಾಧಿಸಲಾಗಿದೆಯೇ; ನಿಗಮದ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಅವ್ಯವಹಾರ ಪ್ರಕರಣಗಳು ಜರುಗಿಸುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td rowspan="2">2019-20 ಮತ್ತು 2020-21 ನೇ ಸಾಲಿನಲ್ಲಿ ಬಿಡುಗಡೆ ಮಾಡಲಾದ ಅನುದಾನವನ್ನು ಬಳಸಿಕೊಂಡು ಗುರಿಗನುಗುಣವಾಗಿ ಸಾಧನೆ ಮಾಡಲಾಗಿರುತ್ತದೆ. 2021-22ನೇ ಸಾಲಿನಿಂದ ಜೂನ್-2022 ರ ಮಾಹೆವರೆಗಿನ ಅವಧಿಯಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಕ್ಕೆ ಸಂಬಂಧಿಸಿದಂತೆ ಈಗಾಗಲೇ ಸರ್ಕಾರದ ಆದೇಶ ಮೇರೆಗೆ ಹಾಗೂ ಪೊಲೀಸ್ ಠಾಣೆಗಳಲ್ಲಿ ದಾಖಲಾದ ಪ್ರಕರಣಗಳಿಗೆ ಸಂಬಂಧಿಸಿದಂತೆ ಸಿ.ಐ.ಡಿ ಸಂಸ್ಥೆಯಿಂದ ತನಿಖೆ ಕೈಗೊಳ್ಳಲಾಗಿದ್ದು, ಪ್ರಗತಿಯಲ್ಲಿರುತ್ತದೆ. ಮಾನ್ಯ ಲೋಕಾಯುಕ್ತ ಸಂಸ್ಥೆಯವರಿಂದಲೂ ಸಹ ತನಿಖೆ ಕೈಗೊಳ್ಳಲಾಗಿದ್ದು, ಪ್ರಗತಿಯಲ್ಲಿರುತ್ತದೆ.</td></tr>
<tr><td>ಇ)</td><td>ಬಂದಿದ್ದಲ್ಲಿ, ಅಕ್ರಮಗಳ ಬಗ್ಗೆ ತನಿಖೆ ಕೈಗೊಳ್ಳಲಾಗಿದೆಯೇ?</td></tr>
</table>

**ಸಕಇ 222 ಎಸ್‌ಎಲ್‌ಪಿ 2024**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**